ಓ.ಎಸ್. ನಂಃ **277/2016**
ಪಿ.ಡಬ್ಲ್ಯೂಃ **1**

ದಿನಾಂಕ **13-02-2026** ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಗೆ ತೆಲುಗು ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ಡಿ.ಎಸ್ ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು ಹಾಗೂ ಅವರಿಗೆ ಪ್ರಮಾಣ ವಚನ ಭೊದಿಸಲಾಯಿತು.

<u>ಪಾಟೀ ಸವಾಲುಃ ಪ್ರತಿವಾದಿಯರ ಪರ: ಶ್ರೀ.ಎ.ಎಸ್.ಪಿ. ವಕೀಲರಿಂದಃ</u>

ನೀವು ಹಾಜರು ಪಡಿಸಿದ ನಿಪಿ-48 ರ ದಾಖಲೆಯ ಹೆಸರು ಗೊತ್ತಿದೆಯೇ ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಸದರಿ ದಾಖಲೆಯನ್ನು ಯಾವ ಕಚೇರಿಯವರು ನೀಡಿರುತ್ತಾರೆ ಎಂಬುದು ಗೊತ್ತಿದೆಯೇ ಎಂದರೆ ಸಾಕ್ಷಿ ಗೊತ್ತಿಲ್ಲ, ನನ್ನ ತಂದೆಗೆ ನಾನು ಸಂಬಂಧವಿಲ್ಲ ಎಂದು ಹೇಳಿದ್ದರಿಂದ ಸದರಿ ದಾಖಲೆ ಹಾಜರು ಮಾಡಿದ್ದೇನೆ ಎಂದು ನುಡಿಯುತ್ತಾರೆ. ಸದರಿ ದಾಖಲೆಯನ್ನು ಪಡೆದುಕೊಂಡ ದಿನಾಂಕ ಗೊತ್ತಿದೆಯೇ ಎಂದರೆ ಸಾಕ್ಷಿ ಗೊತ್ತಿಲ್ಲ, ನಾನು ಅನಕ್ಷರಸ್ಥಳಾಗಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ-48 ರ ದಾಖಲೆಯಲ್ಲಿ ಅಂತಮ್ಮ ತಂದೆ ಅಂತಪ್ಪ ಎಂದು ನಮೂದು ಇರುವುದಿಲ್ಲ ಎಂದರೆ ಸರಿಯಲ್ಲ. ಸದರಿ ದಾಖಲೆಯಲ್ಲಿ ನಮ್ಮ ಕುಟುಂಬದ ಎಲ್ಲ ಸದಸ್ಯರ ಹೆಸರುಗಳು ನಮೂದು ಇದ್ದಾವೆ.

2. ನನ್ನ ಗಂಡನ ಹೆಸರು ಹಣಮಂತ ಎಂದು ಇರುತ್ತದೆ. ಸದರಿ ನಿಪಿ-48 ರ ದಾಖಲೆಯಲ್ಲಿ ನಿಮ್ಮ ಗಂಡನ ಹೆಸರು ನಮೂದು ಇಲ್ಲ ಎಂದರೆ ಸಾಕ್ಷಿ ನನ್ನ ತಂದೆಯ ಕುಟುಂಬ ಸದಸ್ಯರ ದಾಖಲೆಯಲ್ಲಿ ನನ್ನ ಗಂಡನ ಹೆಸರು ಯಾಕೆ ಬರುತ್ತದೆ ಎಂದು ನುಡಿಯುತ್ತಾರೆ. ದಾವೆ ದಾಖಲಿಸಿದ 10 ವರ್ಷಗಳ ನಂತರ ಸುಳ್ಳು ದಾಖಲೆ ಸೃಷ್ಟಿಸಿ ಹಾಜರು ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಕಂದಾಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆ ತಯಾರಿಸಿಕೊಂಡು ಹಾಜರು ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ